# ಕನ್ನಡ ಪೋಸ್ಟ್

ಸಂಪಾದಕ : ಮಂಜು ಬನವಾಸೆ

KANNADA POST

ಇದು ಸುದ್ದಿ ವಿಳಾಸ

ಕನ್ನಡ ದಿನಪತ್ರಿಕೆ

ಹಾಸನ | E-mail : kannadapostnews@gmail.com | / ಕನ್ನಡ post | Price: ₹1

Vol.No.02 | Issue. 150 | Pages. 2 | Date: 20-05-2026, WEDNESDAY | RNI NO: KARKAN/2024/89601 | Kannada Daily

ಸಂಪುಟ : 02 - ಸಂಚಿಕೆ : 150 - ಪುಟಗಳು : 2 | 20-05-2026 | ಬುಧವಾರ | Ph: 8762954248 | ದರ : ₹1


## ಗಾಯಾಳು ಮಾರ್ತಾಂಡ ಆನೆ ವಿಧಿವಶ

### ಪ್ರವಾಸಿಗರ ಪ್ರೀತಿಗೆ ಪಾತ್ರನಾಗಿದ್ದ | ಚಿಕಿತ್ಸೆ ಫಲಿಸದೆ ಅಸುನಿಗೀದ ಮಖ್ನಾ ಆನೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಕೊಡಗು: ಕುಶಾಲನಗರದ ದುಬಾರೆ ಆನೆ ಶಿಬಿರದಲ್ಲಿ ಸೋಮವಾರ ಸಾಕಾನೆಗಳ ನಡುವೆ ನಡೆದ ಭೀಕರ ಕಾದಾಟದಲ್ಲಿ ತೀವ್ರ ಗಾಯಗೊಂಡಿದ್ದ 'ಮಾರ್ತಾಂಡ' ಆನೆ ಚಿಕಿತ್ಸೆ ಫಲಕಾರಿಯಾಗದೆ ಮಂಗಳವಾರ ಕೊನೆಯುಸಿರೆಳೆದಿದೆ.

ಸೋಮವಾರ ಮಧ್ಯಾಹ್ನ ಸುಮಾರು 12 ಗಂಟೆಯ ವೇಳೆಗೆ ಮಾರ್ತಾಂಡ ಮತ್ತು ಕಂಜನ್ ಆನೆಗಳ ನಡುವೆ ಅನಿರೀಕ್ಷಿತವಾಗಿ ಕಾದಾಟ ಆರಂಭವಾಗಿತ್ತು. ಈ ಕಾದಾಟದ ರಭಸಕ್ಕೆ ಸಿಲುಕಿ ಚೆನ್ನೈ ಮೂಲದ ಪ್ರವಾಸಿ ಮಹಿಳೆ ಸ್ಥಳದಲ್ಲೇ ಮೃತಪಟ್ಟಿದ್ದರು. ಪ್ರವಾಸಿ ಮಹಿಳೆಯ ಸಾವಿನ ಬೆನ್ನಲ್ಲೇ ಅರಣ್ಯ ಇಲಾಖೆಯ ಸಾಕಾನೆ ಮಾರ್ತಾಂಡ ಕೂಡ ಸಾವನ್ನಪ್ಪಿದೆ.

ಕಾದಾಟದಲ್ಲಿ ಕಂಜನ್ ಆನೆಯು ತನ್ನ ದಂತಗಳಿಂದ ಮಾರ್ತಾಂಡನ ಹೊಟ್ಟೆ, ಕಿವಿಯ ಹಿಂಭಾಗ ಹಾಗೂ ಕಾಲುಗಳಿಗೆ ಆಳವಾಗಿ ಚುಚ್ಚಿತ್ತು. ಅದರಿಂದಾಗಿ ಮಾರ್ತಾಂಡನಿಗೆ ಗಂಭೀರ ಆಂತರಿಕ ಗಾಯಗಳಾಗಿದ್ದವು.



#### ಹಾಸನಕ್ಕೂ ಮಾರ್ತಾಂಡನಿಗೂ ಉಂಟು ನಂಟು

ಮೃತಪಟ್ಟ ಸಾಕಾನೆ ಮಾರ್ತಾಂಡನಿಗೂ ಹಾಸನ ಜಿಲ್ಲೆಗೂ ಅವಿನಾಭಾವ ಸಂಬಂಧವಿದೆ.

ಸೆರೆಹಿಡಿದು ದೂರದ ಮಲೇಮಹದೇಶ್ವರ ಬೆಟ್ಟ ವ್ಯಾಪ್ತಿಯ ಅರಣ್ಯ ಪ್ರದೇಶಕ್ಕೆ ಬಿಟ್ಟರೂ ವಾಪಾಸ್ ಜಿಲ್ಲೆಗೆ ಆಗಮಿಸಿತ್ತು.

ಆದಾದ ಬಳಿಕ ಸೆರೆ ಹಿಡಿದು ದುಬಾರೆಯಲ್ಲಿ ಪಳಗಿಸಲಾಗಿತ್ತು. ಮೂರು ವರ್ಷಗಳ ಹಿಂದೆ 2023 ಮೇ 19ರಂದು ಸೆರೆ ಹಿಡಿದು ದುಬಾರೆಗೆ ಸಾಗಿಸಲಾಗಿತ್ತು. 2026 ಮೇ 19ರಂದು ಅದೇ ದಿನದಂದು ಮೃತಪಟ್ಟಿರುವುದು ಕಾಕತಾಳೀಯವಾಗಿದೆ.

ಪರಿಸ್ಥಿತಿ ನಿಯಂತ್ರಣಕ್ಕೆ ಬಂದ ನಂತರ, ಗಾಯಗೊಂಡ ಮಾರ್ತಾಂಡ ಆನೆಗೆ ದುಬಾರೆ ಶಿಬಿರದಲ್ಲಿ ಅರಣ್ಯ ಇಲಾಖೆಯ ಪಶುವೈದ್ಯರಾದ ಡಾ. ಮುಜೀಬ್ ಮತ್ತು ಡಾ. ಚಿಟ್ಟಿಯಪ್ಪ ಚಿಕಿತ್ಸೆ ನೀಡುತ್ತಿದ್ದರು.

ಆದಾಗ್ಯೂ ಗಾಯಗಳು ಅತ್ಯಂತ ಆಳವಾಗಿದ್ದರಿಂದ ಮತ್ತು ತೀವ್ರ ರಕ್ತಸ್ರಾವವಾಗಿದ್ದರಿಂದ ಚಿಕಿತ್ಸೆಗೆ ಸ್ಪಂದಿಸದ ಮಾರ್ತಾಂಡ ಆನೆ ಸಾವನ್ನಪ್ಪಿದೆ ಎಂದು ಅಧಿಕಾರಿಗಳು ದೃಢಪಡಿಸಿದ್ದಾರೆ. ಮರಣೋತ್ತರ ಪರೀಕ್ಷೆ ನಡೆಸಿ ಆನೆಯನ್ನು ಶಿಬಿರದ ಆವರಣದಲ್ಲಿ ಸಮಾಧಿ ಮಾಡಲಾಯಿತು. ಮಾರ್ತಾಂಡ ಆನೆಯ ಸಾವಿನ ಸುದ್ದಿ ತಿಳಿಯುತ್ತಿದ್ದಂತೆಯೇ ಅವನನ್ನು ಸಾಕಿದ್ದ ಮಾವುತ ಮತ್ತು ಇತರ ಸಿಬ್ಬಂದಿ ದು:ಖ ವ್ಯಕ್ತಪಡಿಸಿದ್ದಾರೆ.

ಸೌಮ್ಯ ಸ್ವಭಾವಕ್ಕೆ ಹೆಸರಾಗಿದ್ದ ಮಾರ್ತಾಂಡ ಅರಣ್ಯ ಇಲಾಖೆಯ ಹಲವು ಕಾರ್ಯಾಚರಣೆಗಳಲ್ಲಿ ಭಾಗಿಯಾಗಿದ್ದನು.

ದುಬಾರೆಯಲ್ಲಿ ಪ್ರವಾಸಿಗರಿಗೆ ಅತ್ಯಂತ ಪ್ರಿಯನಾಗಿದ್ದ ಈ ಆನೆ ಹೀಗೆ ದಾರುಣವಾಗಿ ಅಂತ್ಯ ಕಂಡಿರುವುದು ಶಿಬಿರದಲ್ಲಿ ಮೌನ ಆವರಿಸುವಂತೆ ಮಾಡಿದೆ. ಈ ಘಟನೆಯ ನಂತರ ಅರಣ್ಯ ಇಲಾಖೆಯ ವಿರುದ್ಧ ಹಲವು ಪ್ರಶ್ನೆಗಳು ಹುಟ್ಟಿಕೊಂಡಿವೆ.

ಕಂಜನ್ ಪ್ರಸ್ತುತ ಶಿಬಿರದಲ್ಲಿ ಪ್ರತ್ಯೇಕವಾಗಿದ್ದು, ಅರಣ್ಯಾಧಿಕಾರಿಗಳು ಅದರ ನಡವಳಿಕೆಯನ್ನು ಗಮನಿಸುತ್ತಿದ್ದಾರೆ. ಏತನ್ಮಧ್ಯೆ, ಮಾರ್ತಾಂಡ ಆನೆಗೆ ಏಳು ಕಡೆ ಪ್ರಮುಖ ಭಾಗಗಳಿಗೆ ಗಾಯಗಳಾಗಿವೆ.

## ಜಿಲ್ಲೆಯ 51 ಶಾಲೆಗಳಲ್ಲಿ ದೂರು/ಸಲಹಾ ಪೆಟ್ಟಿಗೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಗ್ರಾಮೀಣ ಭಾಗದ ಹೆಣ್ಣು ಮಕ್ಕಳ ಸುರಕ್ಷತೆಗಾಗಿ ಸಲಹಾ ಪೆಟ್ಟಿಗೆ ಸ್ಥಾಪಿಸಲಾಗುತ್ತಿದೆ ಎಂದು ದಕ್ಷಿಣ ವಲಯ ಐಜಿ ಬೋರಲಿಂಗಯ್ಯ ಹೇಳಿದರು.

ನಗರದ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕಚೇರಿಯಲ್ಲಿ ಮಂಗಳವಾರ ದೂರು/ಸಲಹಾ ಪೆಟ್ಟಿಗೆ ಬಿಡುಗಡೆಗೊಳಿಸಿ ಮಾತನಾಡಿದ ಅವರು, ವಿದ್ಯಾರ್ಥಿನಿಯರ ನೆರವಿಗಾಗಿ ಪೊಲೀಸ್ ಇಲಾಖೆಯಿಂದ ದೂರು/ಸಲಹಾ ಪೆಟ್ಟಿಗೆ ಯೋಜನೆ ಅನುಷ್ಠಾನಗೊಳಿಸಿದ್ದು, ಯಾವುದೇ ಸಮಸ್ಯೆಯಿದ್ದರೂ ಮಕ್ಕಳು ಪತ್ರದ ಮೂಲಕ ತಿಳಿಸಬಹುದಾಗಿದೆ. ಚಾಮರಾಜನಗರ ಜಿಲ್ಲೆಯ ಬಳಿಕ ಹಾಸನದಲ್ಲಿ ಈ ಪ್ರಕ್ರಿಯೆಯನ್ನು ಪ್ರಾರಂಭಿಸಲಾಗಿದೆ. ನಗರ ಪ್ರದೇಶಗಳಿಂದ ದೂರವಿರುವ, ಮೊಬೈಲ್ ಮತ್ತಿತರ ಸಾಧನ ಸಂಪರ್ಕಗಳ ಸೌಲಭ್ಯವಿಲ್ಲದ ಮಕ್ಕಳು ತಮ್ಮ ಸಮಸ್ಯೆ ಹೇಳಿಕೊಳ್ಳಲು



ಪರದಾಡುತ್ತಿದ್ದಾರೆ. ಬಾಲ್ಯ ವಿವಾಹ, ಪೋಕ್ಸೋ, ದೌರ್ಜನ್ಯ, ಕೌಟುಂಬಿಕ ಕಲಹ ಹೀಗೆ ನಾನಾ ಸಮಸ್ಯೆಗಳಿಂದ ವ್ಯಾಸಂಗದತ್ತ ಆಸಕ್ತಿ ತೋರಿಸಲು ಸಾಧ್ಯವಾಗುವುದಿಲ್ಲ. ಅಂತಹ ವಿದ್ಯಾರ್ಥಿಗಳು ದೂರು ಪೆಟ್ಟಿಗೆಯಲ್ಲಿ ಬರೆದು ಹಾಕಿದರೆ ಸಮಸ್ಯೆಗೆ ಪರಿಹಾರ ಕಲ್ಪಿಸುವ ಕೆಲಸವನ್ನು ಪೊಲೀಸ್ ಇಲಾಖೆ ಮಾಡಲಿದೆ ಎಂದರು.

ಜಿಲ್ಲೆಯ 51 ಪ್ರಾಥಮಿಕ ಹಾಗೂ ಪ್ರೌಢ ಶಾಲೆಯಲ್ಲಿ ಪ್ರಾಯೋಗಿಕವಾಗಿ ಪೆಟ್ಟಿಗೆ ಅಳವಡಿಸಲಾಗುವುದು. ಪ್ರತಿ 15 ದಿನಕ್ಕೊಮ್ಮೆ ಶಾಲೆಯ ವ್ಯಾಪ್ತಿಯ ಪೊಲೀಸ್ ಠಾಣೆಯ ಸಿಬ್ಬಂದಿ ಅದನ್ನು ತೆರೆದು ಪತ್ರಗಳನ್ನು ತರುತ್ತಾರೆ. ಪೆಟ್ಟಿಗೆಯ ಕೀ ಇನ್ಸಪೆಕ್ಟರ್ ಬಳಿ ಇರುತ್ತದೆ. ಏನೇ ಸಮಸ್ಯೆಯಿದ್ದರೂ ಮಕ್ಕಳು ದೂರು ಹೇಳಿಕೊಳ್ಳಬಹುದು ಎಂದರು.

ಸಮಸ್ಯೆ ಇದ್ದರೆ ಮಾತ್ರ ಪತ್ರ ಬರೆಯುವುದಲ್ಲ. ಏನೇ ಸಲಹೆ ಸೂಚನೆ ನೀಡಲು ಪೆಟ್ಟಿಗೆಯನ್ನು ಉಪಯೋಗಿಸಬಹುದು. ಮಲೆನಾಡು ಭಾಗದಲ್ಲಿ ಶಾಲೆಗೆ ಬರಲು ಅನೇಕ ಸಮಸ್ಯೆಗಳಿರುತ್ತವೆ.

ಅಧಿಕಾರಿ ಹಾಗೂ ಪೋಷಕರ ವಿವೇಚನೆಗೆ ಬಾರದ ಪರಿಹಾರೋಪಾಯಗಳು ಮಕ್ಕಳಲ್ಲಿ ಇರಬಹುದು. ಅಂತಹ ವಿಷಯಗಳಿದ್ದರೆ ಸಲಹಾ ಪೆಟ್ಟಿಗೆ ಮೂಲಕ ಹೇಳಬಹುದೆಂದರು.

## ಅಕ್ರಮವಾಗಿ ಸಾಗಿಸುತ್ತಿದ್ದ 19 ಗೋವು ರಕ್ಷಣೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ನಗರದ ಮಂಗಳವಾರದ ಸಂತೆಯಲ್ಲಿ ಅಕ್ರಮವಾಗಿ 19ಕ್ಕೂ ಹೆಚ್ಚು ಗೋವುಗಳನ್ನ ಖರೀದಿಸಿ ಬೇರೆಡೆಗೆ ಸಾಗಿಸುತ್ತಿದ್ದ ಜಾಲವನ್ನು ಬೇಧಿಸಿದ ವಿಶ್ವ ಹಿಂದು ಪರಿಷತ್ ಮತ್ತು ಭಜರಂಗದಳದ ಕಾರ್ಯಕರ್ತರು ನಗರ ಪೊಲೀಸ್ ಠಾಣೆಗೆ ಒಪ್ಪಿಸಿದ್ದಾರೆ.

ವಿಹಿಂಪ-ಭಜರಂಗದಳ ಪ್ರಾಂತ ಗೋ ರಕ್ಷಾ ಸಹ ಪ್ರಮುಖ್ ಶರತ್ ಮಾತನಾಡಿ, ಗೋಹತ್ಯೆ ನಿಷೇಧ ಕಾಯ್ದೆ ಜಾರಿಯಾಗಿದ್ದರೂ ಜಿಲ್ಲೆಯಲ್ಲಿ ಅಕ್ರಮ ಗೋ ಸಾಗಣೆ ಮತ್ತು ಹತ್ಯೆ ನಡೆಯುತ್ತಲೇ ಇವೆ ಎಂದು ಆರೋಪಿಸಿದರು.

ಗೋ ರಕ್ಷಣೆಗಾಗಿ ಸರ್ಕಾರ ಕಟ್ಟುನಿಟ್ಟಿನ ಕಾನೂನು ಜಾರಿ ಮಾಡಿದ್ದರೂ ಅಕ್ರಮಕ್ಕೆ ಕಡಿವಾಣ ಬಿದ್ದಿಲ್ಲ. ಪೊಲೀಸರ ಕಣ್ತಪ್ಪಿಸಿ



ಗೋವುಗಳನ್ನು ಸಾಗಿಸಲಾಗುತ್ತಿದೆ. ಅದರಿಂದ ಗೋ ರಕ್ಷಣೆ ಕೇವಲ ಕಾಗದದ ಮೇಲಿನ ಕಾನೂನಾಗಿ ಉಳಿದಿದೆ ಎಂದರು.

ಬಕ್ರೀದ್ ಹಿನ್ನೆಲೆಯಲ್ಲಿ ಅಕ್ರಮ ಗೋ ಸಾಗಾಣಿಕೆ ಹೆಚ್ಚಾಗುವ ಸಾಧ್ಯತೆ ಇದೆ ಎಂದು ಮನವಿ ಸಲ್ಲಿಸಿದ್ದರೂ ಯಾವುದೇ ಪರಿಣಾಮಕಾರಿ ಕ್ರಮ ಕೈಗೊಂಡಿಲ್ಲ ಎಂದು ದೂರಿದರು.

ಇಂದಿನ ಕಾರ್ಯಾಚರಣೆಯಲ್ಲಿ 19ಕ್ಕೂ ಹೆಚ್ಚು ಗೋವುಗಳನ್ನು ರಕ್ಷಣೆ ಮಾಡಲಾಗಿದ್ದು, ಇವುಗಳನ್ನು ಹಾಸನದಿಂದ ಕೇರಳದ ಕಡೆಗೆ ಸಾಗಿಸಲಾಗುತ್ತಿತ್ತು ಎನ್ನಲಾಗಿದೆ.

ಖಚಿತ ಮಾಹಿತಿ ಮೇರೆಗೆ ಈಗಾಗಲೇ ಮೂರಕ್ಕೂ ಹೆಚ್ಚು ವಾಹನ ಪತ್ತೆ ಹಚ್ಚಿದ್ದು, ಕಾರ್ಯಾಚರಣೆ ಮುಂದುವರಿಯಲಿದೆ ಎಂದರು. ಜಿಲ್ಲೆಯಲ್ಲಿ 2 ಅಕ್ರಮ ಕಸಾಯಿಖಾನೆ ಗುರುತಿಸಲಾಗಿದ್ದು, ಅವುಗಳ ಸಂಪೂರ್ಣ ಮಾಹಿತಿಯನ್ನು ಡಿವೈಎಸ್ಪಿ ಅವರಿಗೆ ನೀಡಲಾಗಿದೆ. ಕೂಡಲೇ 2 ಕಸಾಯಿಖಾನೆಗಳನ್ನು ಬಂದ್ ಮಾಡಿಸಬೇಕು.

ಇಲ್ಲದಿದ್ದರೆ ನಾವೇ ಮುಚ್ಚಿಸಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿದರು. ಜಿಲ್ಲಾಧಿಕಾರಿ ಅವರು ಇತ್ತೀಚೆಗೆ ಸಭೆ ನಡೆಸಿದ ವೇಳೆ ಬಕ್ರೀದ್ ಸಂದರ್ಭದಲ್ಲಿ ಅನಧಿಕೃತ ಗೋ ಸಾಗಾಣಿಕೆ ಹಾಗೂ ಗೋಹತ್ಯೆ ತಡೆಯಲು ಕಟ್ಟುನಿಟ್ಟಿನ ಕ್ರಮ ಕೈಗೊಳ್ಳುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದ್ದರೂ, ಪೊಲೀಸರು ಮಾತ್ರ ತಡೆಯುವ ಕೆಲಸ ಮಾಡುತ್ತಿಲ್ಲ ಎಂದು ಅಸಮಾಧಾನ ಹೊರ ಹಾಕಿದರು. ಕಾರ್ಯಾಚರಣೆಯಲ್ಲಿ ಜಿಲ್ಲಾ ಸೇವಾ ಪ್ರಮುಖ್ ವಿಕ್ಕಿ, ಜಿಲ್ಲಾ ಗೋ ರಕ್ಷಾ ಪ್ರಮುಖ್ ಶಶಿ, ನಗರ ಸಹ ಸಂಯೋಜಕ್ ಚೇತನ್ ಮೊದಲಾದವರಿದ್ದರು.


## ಉಪನ್ಯಾಸಕರ ಸಮನ್ವಯದಿಂದ ಗುಣಮಟ್ಟದ ಶಿಕ್ಷಣ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಸಕಲೇಶಪುರ: ಕಾಲೇಜು ಉಪನ್ಯಾಸಕರ ನಡುವಿನ ಸಮನ್ವಯ, ಉತ್ತಮ ಸಂವಹನ ಹಾಗೂ ಪರಸ್ಪರ ಸಹಕಾರದಿಂದ ಮಾತ್ರ ವಿದ್ಯಾರ್ಥಿಗಳಿಗೆ ಗುಣಮಟ್ಟದ ಶಿಕ್ಷಣದ ಜೊತೆಗೆ ಉತ್ತಮ ಸಂಸ್ಕಾರ ನೀಡಲು ಸಾಧ್ಯ ಎಂದು ಶಾಸಕ ಸಿಮೆಂಟ್ ಮಂಜು ಹೇಳಿದರು.

ಪಟ್ಟಣದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಸೋಮವಾರ ನಡೆದ ಕಾಲೇಜು ಅಭಿವೃದ್ಧಿ ಸಮಿತಿಯ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಉಪನ್ಯಾಸಕರ ನಡುವೆ ಹೊಂದಾಣಿಕೆ ಇದ್ದಾಗ ಬೋಧನೆಯ ಗುಣಮಟ್ಟ ಹೆಚ್ಚುವುದಲ್ಲದೆ ವಿದ್ಯಾರ್ಥಿಗಳ ಸರ್ವತೋಮುಖ ಬೆಳವಣಿಗೆಗೂ ನೆರವಾಗುತ್ತದೆ ಎಂದು ತಿಳಿಸಿದರು.

ಕಾಲೇಜು ಅಭಿವೃದ್ಧಿ ಸಮಿತಿಯ ಅಧ್ಯಕ್ಷರೂ ಆಗಿರುವ ಶಾಸಕ ಸಿಮೆಂಟ್ ಮಂಜು ಅವರು ಕಾಲೇಜಿನ ಶೈಕ್ಷಣಿಕ




ಹಾಗೂ ಮೂಲಸೌಕರ್ಯ ಅಭಿವೃದ್ಧಿ ಕುರಿತಂತೆ ಸಮಗ್ರ ಪರಿಶೀಲನೆ ನಡೆಸಿದರು.

ಈ ವೇಳೆ ಪ್ರಾಂಶುಪಾಲರು ಹಾಗೂ ಸಮಿತಿ ಸದಸ್ಯರೊಂದಿಗೆ ಕಾಲೇಜಿನ ಮುಂದಿನ ಅಭಿವೃದ್ಧಿ ಕಾರ್ಯಗಳು, ವಿದ್ಯಾರ್ಥಿಗಳ ಶೈಕ್ಷಣಿಕ ಪ್ರಗತಿ ಮತ್ತು ಈ ಶೈಕ್ಷಣಿಕ ಸಾಲಿನ ಪ್ರವೇಶಾತಿ ಕುರಿತು ಚರ್ಚಿಸಿ ಅಗತ್ಯ ಸಲಹೆ-ಸೂಚನೆಗಳನ್ನು ನೀಡಿದರು.

ನಂತರ ಉಪನ್ಯಾಸಕರನ್ನು ಹೊರತುಪಡಿಸಿ ವಿದ್ಯಾರ್ಥಿಗಳೊಂದಿಗೆ ಪ್ರತ್ಯೇಕವಾಗಿ ಸಂವಾದ ನಡೆಸಿದ ಶಾಸಕರು, ಕಾಲೇಜಿನ ಕುಂದುಕೊರತೆಗಳನ್ನು ಆಲಿಸಿದರು. ಕಾಲೇಜು ಆವರಣದಲ್ಲಿ ಯಾವುದೇ ಅನೈತಿಕ ಚಟುವಟಿಕೆಗಳಿಗೆ ಅವಕಾಶ ನೀಡಬಾರದು ಎಂದು ಕಟ್ಟುನಿಟ್ಟಿನ ಸೂಚನೆ ನೀಡಿದ ಅವರು, ಶೌಚಾಲಯ, ವಿದ್ಯುತ್ ವ್ಯವಸ್ಥೆ, ಸಿಸಿಟಿವಿ, ಯುಪಿಎಸ್ ಸೇರಿದಂತೆ ಬೇಸಿಗೆ ಹಿನ್ನೆಲೆ ಕೊಠಡಿಗಳಲ್ಲಿನ ಫ್ಯಾನ್‌ಗಳನ್ನು ಸುಸ್ಥಿತಿಯಲ್ಲಿ ನಿರ್ವಹಿಸಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು.

ಈ ವೇಳೆ ಸೂಕ್ತ ಸಮಯದಲ್ಲಿ ಬಸ್ ವ್ಯವಸ್ಥೆ ಕಲ್ಪಿಸಬೇಕೆಂದು ವಿದ್ಯಾರ್ಥಿಗಳು ಮನವಿ ಸಲ್ಲಿಸಿದ ಹಿನ್ನೆಲೆಯಲ್ಲಿ, ತಕ್ಷಣವೇ ಸಾರಿಗೆ ಇಲಾಖೆ ಅಧಿಕಾರಿಗಳಿಗೆ ದೂರವಾಣಿ ಕರೆ ಮಾಡಿದ ಶಾಸಕರು, ವಿದ್ಯಾರ್ಥಿಗಳಿಗೆ ಅನುಕೂಲವಾಗುವಂತೆ ಅಗತ್ಯ ಬಸ್ ವ್ಯವಸ್ಥೆ ಕಲ್ಪಿಸುವಂತೆ ನಿರ್ದೇಶನ ನೀಡಿದರು.

ಸಭೆಯಲ್ಲಿ ಕಾಲೇಜು ಅಭಿವೃದ್ಧಿ ಸಮಿತಿ ಸದಸ್ಯರಾದ ಅಣ್ಣಪ್ಪಸ್ವಾಮಿ, ಮೋಹನ್ ಕುಮಾರ್, ಪ್ರದೀಪ್, ಸುದೀಶ್, ಕೌಶಿಕ್, ಪ್ರಾಂಶುಪಾಲೆ ಸಹನಾ ಇತರರಿದ್ದರು.

## ಸಕಲೇಶಪುರದಲ್ಲಿ ಪ್ರತಿಭಾ ಪುರಸ್ಕಾರ, ಬೆಳೆಗಾರರ ಸಭೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಸಕಲೇಶಪುರ: ವಿದ್ಯೆ ಜೊತೆಗೆ ಸಂಸ್ಕಾರ ಅಳವಡಿಸಿಕೊಂಡರೆ ಮಾತ್ರ ವಿದ್ಯಾರ್ಥಿಗಳು ಸಾಧನೆ ಮಾಡಲು ಸಾಧ್ಯ ಎಂದು ಶಿಕ್ಷಕ ವೆಂಕಟೇಶ್ ಹೇಳಿದರು.

ಪಟ್ಟಣದ ರಾಘವೇಂದ್ರ ನಗರದಲ್ಲಿರುವ ಜಿಲ್ಲಾ ಬೆಳೆಗಾರರ ಭವನದಲ್ಲಿ ಕಸಬಾ ಹೋಬಳಿ ಬೆಳೆಗಾರರ ಸಂಘದಿಂದ ಆಯೋಜಿಸಲಾಗಿದ್ದ ಮಾಸಿಕ ಸಭೆ ಹಾಗೂ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಅತ್ಯಧಿಕ ಅಂಕಗಳನ್ನು ಪಡೆದ ವಿದ್ಯಾರ್ಥಿಗಳಿಗೆ ಅಭಿನಂದನಾ ಸಮಾರಂಭದಲ್ಲಿ ಮಾತನಾಡಿ, ಮೂವತ್ತು ವರ್ಷಗಳ ಹಿಂದೆ ಪ್ರಥಮ ಶ್ರೇಣಿಯಲ್ಲಿ ಎಸ್‌ಎಸ್‌ಎಲ್‌ಸಿ ಪಾಸಾದರೆ ಸರ್ಕಾರಿ ನೌಕರಿ ಸಿಗುತ್ತಿತ್ತು. ಇತ್ತೀಚಿನ ವರ್ಷಗಳಲ್ಲಿ ಪೈಪೋಟಿ ಹೆಚ್ಚಿದ್ದು ಎಷ್ಟೇ ಅಂಕ ಪಡೆದರೂ ಕಡಿಮೆ ಎನ್ನುವಂತಾಗಿದೆ. ಹಿಂದೆ



ಸಾಧನೆ ಎಂಬುದು ನಗರಗಳಿಗೆ ಸೀಮಿತವಾಗಿತ್ತು. ಆದರೆ ಇಂದು ಗ್ರಾಮೀಣ ಭಾಗದಲ್ಲೂ ಸಹ ವಿದ್ಯಾರ್ಥಿಗಳು ನಗರ ವಿದ್ಯಾರ್ಥಿಗಳಿಗೆ ಸರಿಸಮಾನರಾಗಿ ಹೆಚ್ಚು ಅಂಕ ಗಳಿಸುತ್ತಿರುವುದು ಹೆಮ್ಮೆಯ ವಿಷಯ ಎಂದರು.

ಆಧುನಿಕತೆ ಬೆಳೆದಂತೆ ಜೀವನ ಪದ್ಧತಿಯೂ ಬದಲಾಗಿದೆ. ಪಾಶ್ಚಿಮಾತ್ಯ ಸಂಸ್ಕೃತಿ ಅನುಕರಣೆ ಒಳ್ಳೆಯದಲ್ಲ. ಮಕ್ಕಳಲ್ಲಿ ಸಂಸ್ಕೃತಿ ಹಾಗೂ ಸಂಸ್ಕಾರ ಕಾಣೆಯಾಗುತ್ತಿರುವುದು ಬೇಸರದ ಸಂಗತಿ. ವಿದ್ಯಾರ್ಥಿಗಳು ಪೋಷಕರಿಗೆ, ಗುರು ಹಿರಿಯರಿಗೆ, ಶಿಕ್ಷಕರಿಗೆ ಮೊದಲು ಗೌರವ ಕೊಡುವುದನ್ನು ಕಲಿಯಬೇಕು. ಆಗ ಮಾತ್ರ ಕಲಿತ ವಿದ್ಯೆಗೆ ಬೆಲೆ ಬರುತ್ತದೆ ಎಂದು ತಿಳಿಸಿದರು.

ಕಸಬಾ ಹೋಬಳಿ ಬೆಳೆಗಾರರ ಸಂಘದ ಅಧ್ಯಕ್ಷ ಕೆ.ವಿ.ಮೇಘರಾಜ್ ಮಾತನಾಡಿ, ಬೆಳೆಗಾರರ ಸಂಘವು ಕಾಫಿ ಬೆಳೆಗಾರರ ಸಮಸ್ಯೆಗಳನ್ನು ಬಗೆಹರಿಸುವ ಜೊತೆಗೆ ಹಲವು ಸಾಮಾಜಿಕ ಸೇವಾ ಚಟುವಟಿಕೆಗಳನ್ನು ಮಾಡಿಕೊಂಡು ಬರುತ್ತಿದೆ. ಗ್ರಾಮೀಣ ಭಾಗದ ಪ್ರತಿಭೆಗಳನ್ನು ಪ್ರೋತ್ಸಾಹಿಸುವ ನಿಟ್ಟಿನಲ್ಲಿ ಕಸಬಾ ಹೋಬಳಿ ಮಟ್ಟದಲ್ಲಿ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಅತ್ಯಧಿಕ ಅಂಕಗಳನ್ನು ಪಡೆದ ವಿದ್ಯಾರ್ಥಿನಿಯರನ್ನು ಸನ್ಮಾನಿಸಲಾಗುತ್ತಿದೆ ಎಂದರು.

ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಅಧಿಕ ಅಂಕ ಪಡೆದ ಮಾನಸಿ, ಅವಿನ್ಯಾ, ನಿಮಿತಾ, ಸಾನ್ವಿ, ಮನಸಿರಿ, ಪಂಚಮಿ, ನವಮಿ ಅವರನ್ನು ಸನ್ಮಾನಿಸಲಾಯಿತು.

ಜಿಲ್ಲಾ ಬೆಳೆಗಾರರ ಸಂಘದ ಅಧ್ಯಕ್ಷ ಪರಮೇಶ್, ಕಸಬಾ ಹೋಬಳಿ ಬೆಳೆಗಾರರ ಸಂಘದ ಉಪಾಧ್ಯಕ್ಷ ಬಿ.ಎಂ.ಮದನ್ ಕುಮಾರ್, ಗೌರವ ಕಾರ್ಯದರ್ಶಿ ರಾಕೇಶ್, ಜಂಟಿ ಕಾರ್ಯದರ್ಶಿ ಪುಟ್ಟರಾಜು, ಖಜಾಂಚಿ ವಿಜಿತ್ ಮತ್ತಿತರರಿದ್ದರು.

## ಜೂ.6 ರಂದು 11ನೇ ವರ್ಷದ ಸಾಧನಾ ಪುರಸ್ಕಾರ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಮೈತ್ರಿ ಎಜುಕೇಷನ್ ಸೊಸೈಟಿ, ಅಕ್ಷರ ಶ್ರೀ ಫೌಂಡೇಷನ್ ಹಾಗೂ ಕೆ.ಹೊಸಕೋಟೆ ಪರಿವರ್ತನಾ ಕಲಾ ತಂಡದಿಂದ ಜೂನ್ 6 ರಂದು ನಗರದ ಹಾಸನಾಂಬ ಕಲಾಕ್ಷೇತ್ರದಲ್ಲಿ 11ನೇ ವರ್ಷದ ಸಾಧನಾ ಪುರಸ್ಕಾರ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದು ಸಂಸ್ಥೆಯ ಅಧ್ಯಕ್ಷ ವೆಂಕಟೇಶ್ ಮೈತ್ರಿ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಮಂಗಳವಾರ ಮಾತನಾಡಿ, 2025-26ನೇ ಸಾಲಿನ ಎಸ್‌ಎಸ್‌ಎಲ್‌ಸಿ ಹಾಗೂ ಪಿಯುಸಿ ಪರೀಕ್ಷೆಗಳಲ್ಲಿ ಅತಿ ಹೆಚ್ಚು ಅಂಕ ಗಳಿಸಿದ ವಿದ್ಯಾರ್ಥಿಗಳಿಗೆ ವಿಶೇಷ ಸನ್ಮಾನ ಹಾಗೂ ಪ್ರತಿಭಾ ಪುರಸ್ಕಾರ ಹಮ್ಮಿಕೊಳ್ಳಲಾಗಿದೆ ಎಂದರು.

ಜಿಲ್ಲೆಯ ಗ್ರಾಮೀಣ ಹಾಗೂ ನಗರ ಭಾಗಗಳ ಪ್ರತಿಭಾವಂತ ವಿದ್ಯಾರ್ಥಿಗಳನ್ನು ಗುರುತಿಸಿ ಪ್ರೋತ್ಸಾಹಿಸುವ ಉದ್ದೇಶದಿಂದ ಕಾರ್ಯಕ್ರಮ ರೂಪಿಸಲಾಗಿದೆ. ಶಿಕ್ಷಣ ಕ್ಷೇತ್ರದಲ್ಲಿ ಮೇಲುಗೈ ಸಾಧಿಸಿದ ವಿದ್ಯಾರ್ಥಿಗಳಿಗೆ ಗೌರವ ಸಲ್ಲಿಸುವ ಮೂಲಕ ಇತರ ವಿದ್ಯಾರ್ಥಿಗಳಲ್ಲೂ




ಸ್ಪರ್ಧಾತ್ಮಕ ಮನೋಭಾವ ಬೆಳೆಸುವ ಪ್ರಯತ್ನ ಇದಾಗಿದೆ ಎಂದರು.

ಸಮಾಜಸೇವೆ, ಆರೋಗ್ಯ, ಶಿಕ್ಷಣ, ಕೃಷಿ, ಕಲೆ, ಸಾಹಿತ್ಯ, ಪತ್ರಿಕೋದ್ಯಮ, ರಂಗಭೂಮಿ, ಸಾಂಸ್ಕೃತಿಕ ಕ್ಷೇತ್ರ, ಸೇರಿದಂತೆ ಹಲವಾರು ವಿಭಾಗಗಳಲ್ಲಿ ಸೇವೆ ಸಲ್ಲಿಸಿದ ಗಣ್ಯರನ್ನು ಗೌರವಿಸಲು ತೀರ್ಮಾನಿಸಲಾಗಿದೆ ಎಂದು ಹೇಳಿದರು.

ನಗರದ ಜವೇನಹಳ್ಳಿ ಮಠದ ಸಂಗಮೇಶ್ವರ ಸ್ವಾಮೀಜಿ, ಬಸವಾಪಟ್ಟಣ ತೋಂಟಧಾರಿ ಮಠದ ಬಸವಲಿಂಗ ಸ್ವಾಮೀಜಿ ದಿವ್ಯ ಸಾನಿಧ್ಯ ವಹಿಸುವರು. ಜಿಲ್ಲಾಧಿಕಾರಿ ಕೆ.ಎಸ್.ಲತಾಕುಮಾರಿ ಉದ್ಘಾಟನೆ ನೆರವೇರಿಸುವರು. ಮುಖ್ಯ ಅತಿಥಿಗಳಾಗಿ ಸ್ಥಳೀಯ ಶಾಸಕ ಹೆಚ್.ಪಿ.ಸ್ವರೂಪ್ ಪ್ರಕಾಶ್, ಸಕಲೇಶಪುರ ಶಾಸಕ ಸಿಮೆಂಟ್ ಮಂಜು, ಹಿರಿಯ ಪತ್ರಕರ್ತೆ ವಿಜಯಲಕ್ಷ್ಮಿ ಶಿಬರೂರು ಭಾಗವಹಿಸಲಿದ್ದಾರೆ ಎಂದರು.

ಪ್ರತಿಭಾವಂತ ವಿದ್ಯಾರ್ಥಿಗಳು ತಮ್ಮ ಅಂಕಪಟ್ಟಿ ಸಮೇತ ಅರ್ಜಿ ಸಲ್ಲಿಸಬಹುದು.

ಅರ್ಹ ವಿದ್ಯಾರ್ಥಿಗಳು ಹಾಗೂ ಸಾಧಕರು ಮೇ 29 ರೊಳಗೆ 87621-15463 ಮತ್ತು 63614-79093 ಸಂಖ್ಯೆಗೆ ಸಂಪರ್ಕಿಸಬಹುದಾಗಿದೆ ಎಂದರು.

ಸಂಸ್ಥೆಯ ರಾಜಯ್ಯ, ಪರಿವರ್ತನಾ ಕಲಾ ತಂಡದ ಉಪಾಧ್ಯಕ್ಷ ಅಣ್ಣಪ್ಪ ಹ್ಯಾರಿಗಳಲೆ, ಅಕ್ಷರ ಶ್ರೀ ಫೌಂಡೇಷನ್ ನಿರ್ದೇಶಕ ಮಂಜು, ಕಾರ್ಯದರ್ಶಿ ನಲ್ಲೂರು ಶಿವಣ್ಣ ಇದ್ದರು.

## ವೈಡಿಡಿ ಕಾಲೇಜಿನಲ್ಲಿ ಶಾಂತಲಾ ಕಲಾಭವನ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಬೇಲೂರು: ಸಾವಿರಾರು ವರ್ಷಗಳ ಇತಿಹಾಸ ಹೊಂದಿರುವ ಬೇಲೂರಿನ ಇತಿಹಾಸ ಹಾಗೂ ಪರಂಪರೆ ಸಂರಕ್ಷಣೆ ಉದ್ದೇಶದಿಂದ ವೈಡಿಡಿ ಕಾಲೇಜಿನಲ್ಲಿ 4.22 ಕೋಟಿ ರೂ. ವೆಚ್ಚದಲ್ಲಿ ಶಾಂತಲಾ ಕಲಾಭವನ ನಿರ್ಮಿಸಲಾಗುತ್ತಿದೆ ಎಂದು ಶಾಸಕ ಹೆಚ್.ಕೆ.ಸುರೇಶ್ ಹೇಳಿದರು.

ಪಟ್ಟಣದ ವೈಡಿಡಿ ಪ್ರಥಮ ದರ್ಜೆ ಕಾಲೇಜಿನ 2025-26 ನೇ ಸಾಲಿನ



ಸಾಂಸ್ಕೃತಿಕ, ಕ್ರೀಡೆ, ಎನ್‌ಎಸ್‌ಎಸ್ ಸೇರಿದಂತೆ ವಿವಿಧ ಚಟುವಟಿಕೆಗಳ ಸಮಾರೋಪ ಸಮಾರಂಭ ಉದ್ಘಾಟಿಸಿ ಮಾತನಾಡಿದ ಅವರು, ಕಾಲೇಜಿಗೆ ಈಗಾಗಲೇ ಬಹುತೇಕ ಮೂಲಸೌಲಭ್ಯಗಳನ್ನು ಕಲ್ಪಿಸಿದ್ದು

ಮುಂದೆ ಹೈಟೆಕ್ ಮಟ್ಟದಲ್ಲಿ ಕ್ರಿಕೆಟ್ ಕ್ರೀಡಾಂಗಣ ನಿರ್ಮಿಸಲು ಬದ್ಧ, ಆದರೆ ವಿದ್ಯಾರ್ಥಿಗಳ ಸಂಖ್ಯೆ ಇಳಿಮುಖದ ನಡುವೆ ಕಾಲೇಜು ಫಲಿತಾಂಶ ಮತ್ತು ಕ್ರೀಡೆಯಲ್ಲಿ ಅತ್ಯುನ್ನತ ಸಾಧನೆ ಮಾಡಿದೆ. ವಿದ್ಯಾರ್ಥಿಗಳು ಜವಾಬ್ದಾರಿಯಿಂದ ವ್ಯಾಸಂಗ ಮಾಡಿ, ಓದಿನ ಜೊತೆಗೆ ಕ್ರೀಡೆಯಲ್ಲಿ ಕಡ್ಡಾಯವಾಗಿ ಭಾಗವಹಿಸಿ ಆರೋಗ್ಯವಂತರಾಗಿ ಎಂದು ಕರೆ ನೀಡಿದರು. ವಿಶ್ರಾಂತ ಪ್ರಾಂಶುಪಾಲ ಡಾ. ಜಿ.ಡಿ.ನಾರಾಯಣ್ ಮಾತನಾಡಿ, ಪ್ರಸಕ್ತ ದಿನಮಾನದಲ್ಲಿ ಮೊಬೈಲ್ ವ್ಯಾಮೋಹದಿಂದ ವಿದ್ಯಾರ್ಥಿಗಳ ಶಿಕ್ಷಣ ಕುಂಠಿತವಾಗುತ್ತಿದೆ. ಮೊಬೈಲ್ ನಿಮ್ಮ ಸೃಜನಶೀಲತೆಗೆ ಧಕ್ಕೆಯುಂಟು ಮಾಡುತ್ತದೆ. ವೈಡಿಡಿ ಕಾಲೇಜಿಗೆ ಇತಿಹಾಸವಿದ್ದು ಇಲ್ಲಿನ ಸೌಲಭ್ಯಗಳನ್ನು ಬಳಸಿಕೊಂಡು ಮತ್ತು ಹೆತ್ತವರ ಬೆವರಿನ ಹನಿಯ ನೆನಪಿನಲ್ಲಿ ಉತ್ತಮವಾಗಿ ಓದಿ ಸುಂದರ ಬದುಕು ಕಟ್ಟಿಕೊಳ್ಳಬೇಕು. ಪತ್ರಿಕೆಗಳನ್ನು ಓದುವ ಹವ್ಯಾಸ ಬೆಳೆಸಿಕೊಳ್ಳಿ ಎಂದು ಕಿವಿಮಾತು ಹೇಳಿದರು.

# ಸ್ಪರ್ಧಾತ್ಮಕ ಪರೀಕ್ಷಾರ್ಥಿಗಳಿಗಾಗಿ ಸ್ಪರ್ಧಾ ಕುಟೀರ ಪ್ರಾರಂಭಿಸಿ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**



ಹಾಸನ: ಜಿಲ್ಲೆಯ ಯುವಕರ ಅಧ್ಯಯನಕ್ಕೆ ನೆರವಾಗುವ ನಿಟ್ಟಿನಲ್ಲಿ ಜಿಲ್ಲಾ ಕೇಂದ್ರ ಗ್ರಂಥಾಲಯದ ಅಧೀನದಲ್ಲಿರುವ ತಾಂತ್ರಿಕ ವಿಭಾಗದ ಕೊಠಡಿಯಲ್ಲಿ ಸ್ಪರ್ಧಾತ್ಮಕ ಅಧ್ಯಯನ ಕೇಂದ್ರ, ಆಹಾಸನ ಸ್ಪರ್ಧಾ ಕುಟೀರಟಿ ಪ್ರಾರಂಭಿಸಬೇಕೆಂದು ಜಿಲ್ಲಾಧಿಕಾರಿ ಕೆ.ಎಸ್.ಲತಾಕುಮಾರಿ ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ನಡೆದ ಸಭೆಯಲ್ಲಿ ಮಾತನಾಡಿದ ಅವರು, ಗ್ರಂಥಾಲಯದಲ್ಲಿ ಓದುಗರಿಗೆ ಮೂಲಸೌಕರ್ಯ ಕಲ್ಪಿಸುವ ನಿಟ್ಟಿನಲ್ಲಿ ಕ್ರಮ ಕೈಗೊಳ್ಳಬೇಕು. ಜಿಲ್ಲಾ ಗ್ರಂಥಾಲಯ ಅಧೀನದಲ್ಲಿರುವ ವಾಹನಗಳನ್ನು ನಿಲ್ಲಿಸಲು ನಿರ್ಮಿಸಿರುವ ಶೆಡ್‌ನಲ್ಲಿ ಪರಾಮರ್ಶನ ವಿಭಾಗದ ಓದುಗರಿಗೆ ಸ್ಥಳಾವಕಾಶ ವಿಸ್ತರಿಸಬೇಕೆಂದರು.

ಹಾಸನ ಸ್ಪರ್ಧಾ ಕುಟೀರ ಕೋಚಿಂಗ್ ಸೆಂಟರ್‌ನಲ್ಲಿ ಸೀಟಿಂಗ್ ಆರೆಂಜ್ ಮೆಂಟ್ ಹಾಗು ಡಿಜಿಟಲ್ ಬೋರ್ಡ್ ಅಳವಡಿಸಿ ಯಾವುದೇ ಇಲಾಖೆಯ ನೋಟಿಫಿಕೇಶನ್ ಆದರೆ ಮಾಹಿತಿಯನ್ನು ಪ್ರಕಟಿಸಿ ಮಕ್ಕಳಿಗೆ ಲಭ್ಯವಾಗುವಂತೆ ನೋಡಿಕೊಳ್ಳಿ ಎಂದು ತಿಳಿಸಿದರು.

ಸ್ಪರ್ಧಾತ್ಮಕ ಪರೀಕ್ಷೆ ಅಧ್ಯಯನ ಮಾಡಲು ಬರುವ ಮಕ್ಕಳ ನೋಂದಣಿ ಮಾಡಿಸಬೇಕು. ಮಕ್ಕಳ ಬಳಕೆಗೆ ನೆರವಾಗುವಂತೆ ಕಲಾಭವನದ ಮೂರನೇ ಮಹಡಿಯಲ್ಲಿರುವ ಗ್ರಂಥಾಲಯವನ್ನು ಕೆಳಭಾಗಕ್ಕೆ ಸ್ಥಳಾಂತರ ಮಾಡಿ ಗ್ರಂಥಾಲಯ ಮತ್ತು ಕಲಾಭವನಕ್ಕೆ ಸಂಪರ್ಕ ಕಲ್ಪಿಸಲು ಒಂದು ಗೇಟ್ ಅಳವಡಿಸಲು ಕ್ರಮ ಕೈಗೊಳ್ಳಬೇಕು. ಕಲಾಕ್ಷೇತ್ರದ ಹೊರಭಾಗದಲ್ಲಿ ಮೈಕ್ ಬಳಕೆಯನ್ನು ನಿಷೇಧಿಸುವಂತೆ ಸೂಚನೆ ನೀಡಿದರು.

ಓದುವ ಮಕ್ಕಳಿಗೆ ಅನುಕೂಲವಾಗುವಂತೆ ಗ್ರಂಥಾಲಯದ ಬಳಿ ಇಂದಿರಾ ಕ್ಯಾಂಟೀನ್ ಆರಂಭಿಸಬೇಕು. ಓದುಗರಿಗೆ ತೊಂದರೆ ಆಗದಂತೆ ನಿಶಬ್ದತೆ ಕಾಪಾಡಬೇಕು. ಈ ನಿಟ್ಟಿನಲ್ಲಿ ಬೇರೆಯವರು ಅನಾವಶ್ಯಕವಾಗಿ ಬಂದು ಕುಳಿತು ನಿದ್ದೆ ಮಾಡುವುದು ಅಥವಾ ಕಾಲಹರಣ ಮಾಡುವ ಕೆಲಸಗಳಾಗಬಾರದು. ಉಚಿತ ವೈಫೈ ಮತ್ತು ಇಂಟರ್ನೆಟ್ ವ್ಯವಸ್ಥೆ ಕಲ್ಪಿಸಲು ತಿಳಿಸಿದರು.ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಪರಾಮರ್ಶನ ವಿಭಾಗದಲ್ಲಿ ಓದುಗರು ಕುಳಿತು ಕೊಳ್ಳಲು ಅಗತ್ಯ ಪಿಠೋಪಕರಣಗಳಿಗೆ ಕ್ರಿಯಾ ಯೋಜನೆ ತಯಾರಿಸಿ ಜೊತೆಗೆ ನಗರ ಗ್ರಂಥಾಲಯದ ಹಳೆಯ ಕಟ್ಟಡದಲ್ಲಿರುವ ದಿನಪತ್ರಿಕೆ ವಿಭಾಗವನ್ನು ಕೆಲವು ಪರಿವರ್ತನೆಗಾಗಿ ಯೋಜನೆ ತಯಾರಿಸಿ ಎಂದು ತಿಳಿಸಿದರು.

ಜಿಲ್ಲಾ ಕೇಂದ್ರ ಗ್ರಂಥಾಲಯದ ಉಪ ನಿರ್ದೇಶಕಿ ಹಸೀನಾ ತಾಜ್, ನಗರ ಕೇಂದ್ರ ಗ್ರಂಥಾಲಯದ ಉಪ ನಿರ್ದೇಶಕಿ ನಳಿನಿ, ನಿರ್ಮಿತಿ ಕೇಂದ್ರದ ಯೋಜನಾ ನಿರ್ದೇಶಕ ರಾಮಕೃಷ್ಣ, ತಹಶೀಲ್ದಾರ್ ಗೀತಾ ಇತರರಿದ್ದರು.

## ಪ್ರತ್ಯೇಕ ಶೌಚಾಲಯಕ್ಕೆ ಸೂಚನೆ

ಹೊಸ ಕಟ್ಟಡ ನಿರ್ಮಾಣ ಕಾಮಗಾರಿಯನ್ನು ಪೂರ್ಣಗೊಳಿಸಲು ಎಷ್ಟು ಹಣ ಬೇಕು ಎಂಬುದರ ಮಾಹಿತಿಯನ್ನು ನಿರ್ಮಿತಿ ಕೇಂದ್ರದವರು ಶೀಘ್ರ ನೀಡಬೇಕು. ಹೆಣ್ಣು ಮತ್ತು ಗಂಡು ಮಕ್ಕಳಿಗೆ ಪ್ರತ್ಯೇಕ ಶೌಚಾಲಯ ನಿರ್ಮಾಣಕ್ಕೆ ಗ್ರಂಥಾಲಯ ಆವರಣದ ಕಾಂಪೌಂಡ್ ಅನ್ನು ಕಡಿಮೆ ವೆಚ್ಚದಲ್ಲಿ ಎತ್ತರಿಸಲು ಕ್ರಿಯಾ ಯೋಜನೆ ತಯಾರಿಸಬೇಕು ಎಂದರು.

## ಬೀದಿ ಬದಿ ಅಂಗಡಿ ತೆರವುಗೊಳಿಸಿ

ಗ್ರಂಥಾಲಯದ ಆವರಣದಲ್ಲಿ ಗಿಡಗಳನ್ನು ನೆಡುವುದು, ಸ್ವಚ್ಛತೆಗೆ ಆದ್ಯತೆ ನೀಡಬೇಕು. ವಾಹನ ಪಾರ್ಕಿಂಗ್ ವ್ಯವಸ್ಥೆ ಚೆನ್ನಾಗಿರಬೇಕು. ನಿರ್ವಹಣೆಗೆ ಕಾವಲುಗಾರನ ನಿಯೋಜಿಸಬೇಕು. ವಾಹನಗಳ ಪಾರ್ಕಿಂಗ್ ಶೆಡ್‌ನಲ್ಲಿರುವ ಹಳೆಯ ವಾಹನಗಳನ್ನು ನಿಯಮಾನುಸಾರ ವಿಲೇವಾರಿ ಮಾಡಿ ಸ್ಥಳವನ್ನು ಸದ್ಬಳಕೆ ಮಾಡಿಕೊಳ್ಳಲು ಸೂಚನೆ ನೀಡಿದರು.

ಗ್ರಂಥಾಲಯದ ಮುಂಭಾಗದಲ್ಲಿರುವ ಹೂವಿನ ಹಾಗು ಹಣ್ಣಿನ ಅಂಗಡಿಗಳನ್ನು ತೆರವುಗೊಳಿಸಲು ಕ್ರಮ ಕೈಗೊಳ್ಳಬೇಕು. ಗ್ರಂಥಾಲಯಕ್ಕೆ ಬರುವ ಓದುಗರಿಗೆ ತೊಂದರೆ ಆಗದಂತೆ ದುರ್ವಾಸನೆ ಬರದಂತೆ ಯು.ಜಿ.ಡಿ.ವ್ಯವಸ್ಥೆಯನ್ನು ಸರಿಯಾಗಿ ನಿರ್ವಹಣೆಗೆ ನಿಗಾ ವಹಿಸಲು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

# ಅಕ್ರಮ ಬಂಧನದಲ್ಲಿದ್ದ ಮಕ್ಕಳು ಸೇರಿ 35 ಕಾರ್ಮಿಕರ ರಕ್ಷಣೆ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಕೂಲಿ ಕೆಲಸದ ನೆಪದಲ್ಲಿ ಅಕ್ರಮ ಬಂಧನದಲ್ಲಿದ್ದ ಮಕ್ಕಳು ಸೇರಿ 35 ಜನರನ್ನು ನಗರ ಠಾಣೆ ಪೊಲೀಸರು ರಕ್ಷಿಸಿದ್ದಾರೆ.

ನಗರದ ಹೈಸ್ಕೂಲ್ ಫೀಲ್ಡ್ ಮೈದಾನದ ಶೆಡ್‌ಗಳಲ್ಲಿದ್ದ ಕಾರ್ಮಿಕರನ್ನು ಪೊಲೀಸರು, ಸಮಾಜ ಕಲ್ಯಾಣ ಇಲಾಖೆ, ಕಾರ್ಮಿಕ ಇಲಾಖೆ ಅಧಿಕಾರಿಗಳ ಸಮ್ಮುಖದಲ್ಲಿ ಸುಪರ್ದಿಗೆ ಪಡೆಯಲಾಯಿತು. ಮಹಿಳೆಯರು, ಪುರುಷರು 26 ಹಾಗೂ ಒಂಬತ್ತು ಮಕ್ಕಳು ಕೂಲಿ ಕೆಲಸ ಮಾಡಿಕೊಂಡಿದ್ದರು. ಬಿಎಸ್ ಆರ್ ಎಂಬ ಕಂಪನಿಯಡಿ ಕಟ್ಟಡ ಕಾರ್ಮಿಕರಾಗಿ ಎಲ್ಲರೂ ಕೆಲಸ ಮಾಡಿಕೊಂಡಿದ್ದರು. ಆಂಧ್ರ ಪ್ರದೇಶ ಮೂಲದ ಈ ಕಾರ್ಮಿಕರಿಗೆ ಸರಿಯಾಗಿ ವೇತನ ನೀಡುತ್ತಿರಲಿಲ್ಲ. ಬೆಳಿಗ್ಗೆಯಿಂದ ಸಂಜೆ ವರೆಗೆ ದುಡಿದರೂ ಕೇವಲ 250 ರೂ. ವೇತನ ನೀಡಲಾಗುತ್ತಿತ್ತು. ಊರಿಗೆ ಕಳುಹಿಸುತ್ತಿರಲಿಲ್ಲ. ಮೊಬೈಲ್ ಬಳಕೆಗೆ ಅವಕಾಶ ಇರಲಿಲ್ಲ ಎಂದು ತಿಳಿದುಬಂದಿದೆ.

ಕಾರ್ಮಿಕರು ನೀಡಿದ ಮಾಹಿತಿ ಆಧರಿಸಿ ಪೊಲೀಸರು ದಾಳಿ ನಡೆಸಿದ್ದಾರೆ. ರಕ್ಷಿಸಿರುವ ಕಾರ್ಮಿಕರನ್ನು ಸಮಾಜ ಕಲ್ಯಾಣ ಇಲಾಖೆಯ ವಸತಿ ನಿಲಯಕ್ಕೆ ರವಾನಿಸಿದ್ದು ಕಾನೂನು ಪ್ರಕ್ರಿಯೆ ಮುಂದುವರಿದಿದೆ. ಉಪವಿಭಾಗಾಧಿಕಾರಿ ಜಗದೀಶ್ ಗಂಗಣ್ಣವರ್, ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ದಿಲೀಪ್ ಮತ್ತಿತರರಿದ್ದರು.

# ಪಶು ವೈದ್ಯಕೀಯ ಕಾಲೇಜಿನಲ್ಲಿ ದಲಿತ ವಿದ್ಯಾರ್ಥಿಗೆ ಕಿರುಕುಳ ಆರೋಪ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**



ಹಾಸನ: ನಗರದ ಪಶು ವೈದ್ಯಕೀಯ ಕಾಲೇಜಿನ ಎಂ.ವರ್ಧನ್ ಎಂಬ ವಿದ್ಯಾರ್ಥಿಗೆ ಆಂತರಿಕ ಅಂಕಗಳನ್ನು ನೀಡದೆ ದುರುದ್ದೇಶದಿಂದ ಅನುತ್ತೀರ್ಣಗೊಳಿಸಿರುವ ಕಾಲೇಜು ಉತ್ತರ ಪತ್ರಿಕೆಯನ್ನು ನೀಡದೆ ಭವಿಷ್ಯದೊಂದಿಗೆ ಚೆಲ್ಲಾಟವಾಡುತ್ತಿದೆ. ಮತ್ತೊಂದೆಡೆ ರ್‍ಯಾಗಿಂಗ್ ಮೂಲಕ ವಿದ್ಯಾರ್ಥಿಯನ್ನು ಮಾನಸಿಕವಾಗಿ ಕುಗ್ಗಿಸಲಾಗುತ್ತಿದೆ ಎಂದು ದಲಿತ ಮುಖಂಡ ಹೆಚ್.ಕೆ.ಸಂದೇಶ್ ಆರೋಪಿಸಿದರು.

ಸುದ್ದಿಗೋಷ್ಠಿಯಲ್ಲಿ ಸೋಮವಾರ ಮಾತನಾಡಿದ ಅವರು, ಸತ್ಯಮಂಗಲ ಬಡಾವಣೆಯ ಮೋಹನ್‌ಕುಮಾರ್ ಎಂಬುವವರ ಪುತ್ರ, ವರ್ಧನ್ 2023ರಲ್ಲಿ ಎನ್‌ಆರ್‌ಐಎಸ್ ಕೋಟಾದಡಿ 12 ಲಕ್ಷ ರೂ. ಪಾವತಿಸಿ ಪ್ರಥಮ ಬಿವಿಎಸ್/ಎಹೆಚ್ ಕೋರ್ಸ್‌ಗೆ ಪ್ರವೇಶ ಪಡೆದಿದ್ದರು.

ಆದರೆ ಪ್ರಥಮ ವರ್ಷದಲ್ಲೇ ವರ್ಧನ್ ಅನುತ್ತೀರ್ಣನಾಗಿದ್ದಾನೆ. ಫಲಿತಾಂಶದ ಕುರಿತು ಸಂಶಯಗೊಂಡ ಆತ ಪರಿಶೀಲನೆಗಾಗಿ ಉತ್ತರ ಪತ್ರಿಕೆಗೆ ಅರ್ಜಿ ಸಲ್ಲಿಸಿದರೂ ಪಶು ವೈದ್ಯಕೀಯ ವಿಶ್ವವಿದ್ಯಾಲಯದಿಂದ ಈ ವರೆಗೆ ಉತ್ತರ ಪತ್ರಿಕೆ ಸಿಕ್ಕಿಲ್ಲ. ಸೀಟು ಉಳಿಸಿಕೊಳ್ಳುವ ಉದ್ದೇಶದಿಂದ ಮತ್ತೆ 12 ಲಕ್ಷ ರೂ. ಪಾವತಿ ಮಾಡಲಾಗಿದೆ ಎಂದರು.

ಈ ಸಮಸ್ಯೆಯ ನಡುವೆ ಹಿರಿಯ ವಿದ್ಯಾರ್ಥಿಗಳು ರ್‍ಯಾಗಿಂಗ್ ಮೂಲಕ ವರ್ಧನ್ ಅವರನ್ನು ಮಾನಸಿಕವಾಗಿ ಕುಗ್ಗುವಂತೆ ಮಾಡಿದ್ದಾರೆ. ಹಾಸ್ಟೆಲ್‌ನಲ್ಲಿ ಊಟ ವ್ಯರ್ಥ ಮಾಡಬೇಡಿ ಎಂದು ಸಲಹೆ ನೀಡಿದ್ದಕ್ಕೆ ರ್‍ಯಾಗಿಂಗ್ ಮಾಡಲಾಗಿದೆ. ತಪ್ಪಿತಸ್ಥರ ವಿರುದ್ಧ ಕ್ರಮ ಜರುಗಿಸಬೇಕಿದ್ದ ಕಾಲೇಜಿನ ಡೀನ್ ಮೌನವಾಗಿದ್ದು ಸಂಶಯಕ್ಕೆ ಎಡೆಮಾಡಿಕೊಟ್ಟಿದೆ ಎಂದರು.

ರ್‍ಯಾಗಿಂಗ್ ಬಗ್ಗೆ ಕಾಲೇಜಿನವರು 6 ಜನರ ತಂಡ ರಚಿಸಿ ತನಿಖೆ ನಡೆಸಿದ ವೇಳೆ, ಆ ಸಮಿತಿಯು ರ್‍ಯಾಗಿಂಗ್ ನಡೆದಿರುವುದು ಸತ್ಯ ಎಂಬ ವರದಿ ನೀಡಿದೆ. ಆದರೆ ತಪ್ಪಿತಸ್ಥರ ವಿರುದ್ಧ ಡೀನ್ ಅವರು ಸಣ್ಣ ಕ್ರಮ ಜರುಗಿಸಿ ಸುಮ್ಮನಾಗಿದ್ದಾರೆ ಎಂದರು.

ಅನ್ಯಾಯದ ಬಗ್ಗೆ ಬೀದರ್‌ನ ಕರ್ನಾಟಕ ಪಶು ವೈದ್ಯಕೀಯ ವಿದ್ಯಾಲಯದ ರಿಜಿಸ್ಟ್ರಾರ್‌ಗೆ ನ್ಯಾಯ ಮತ್ತು ಸಮಗ್ರ ತನಿಖೆಗೆ ಕೋರಿ 2 ಬಾರಿ ಲಿಖಿತ ದೂರು ನೀಡಿದ್ದರೂ ಕೂಡ ಯಾವುದೇ ಕ್ರಮ ಕೈಗೊಂಡಿಲ್ಲ. ಪರಿಣಾಮ ವಿದ್ಯಾರ್ಥಿಯ ಅಮೂಲ್ಯ 2 ವರ್ಷ ಸಮಯ ವ್ಯರ್ಥವಾಗಿದೆ ಎಂದು ದೂರಿದರು.

ಇನ್ನಾದರೂ ಸರ್ಕಾರ ಮತ್ತು ಸಂಬಂಧಪಟ್ಟ ಸಚಿವರು ನೊಂದ ವಿದ್ಯಾರ್ಥಿಗೆ ನ್ಯಾಯ ಕೊಡಿಸಬೇಕು. ಎಸ್‌ಸಿ/ಎಸ್‌ಟಿ ವರ್ಗಗಳ ದೌರ್ಜನ್ಯ ವಿರೋಧಿ ಕಾಯ್ದೆ ಅಡಿ ತಪ್ಪಿತಸ್ಥರನ್ನು ಬಂಧಿಸಿ, ಕಠಿಣ ಕ್ರಮ ಜರುಗಿಸಬೇಕು. ಇದೇ ಕಾಲೇಜಲ್ಲಿ ಓದಲು ಅವಕಾಶ ನೀಡಬೇಕು. ಇಲ್ಲದಿದ್ದರೆ ಪ್ರತಿಭಟನೆ ಹಮ್ಮಿಕೊಳ್ಳುವುದಾಗಿ ಎಚ್ಚರಿಸಿದರು.

ಸುದ್ದಿಗೋಷ್ಠಿಯಲ್ಲಿ ಡಿಎಸ್‌ಎಸ್ ಪರಿವರ್ತನಾವಾದ ಸಮಿತಿ ಜಿಲ್ಲಾಧ್ಯಕ್ಷ ಮಂಜು ತೇಜೂರು, ಜಿಲ್ಲಾ ಉಪಾಧ್ಯಕ್ಷ ಹೆಚ್.ಜೆ.ಉಮೇಶ್, ಮುಖಂಡರಾದ ಗಣೇಶ್ ವೇಲಾಪುರಿ, ತೋಟೇಶ್ ನಿಟ್ಟೂರು, ರಾಮು ನರಸಿನಕುಪ್ಪೆ ಹಾಜರಿದ್ದರು.

# ವಿದ್ಯಾರ್ಥಿಗಳು ತಪಸ್ಸಿನ ರೀತಿ ಅಧ್ಯಯನ ಮಾಡಬೇಕು




**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ವಿದ್ಯಾರ್ಥಿಗಳು ತಮ್ಮ ಅಧ್ಯಯನದ ವೇಳೆಯಲ್ಲಿ ತಪಸ್ವಿಗಳಾಗಿರಬೇಕು. ಅಧ್ಯಯನ ಮತ್ತು ಅಧ್ಯಾಪನ ಇವೆರಡನ್ನು ಮೈಗೂಡಿಸಿಕೊಂಡಲ್ಲಿ ಭವಿಷ್ಯ ಸುಭದ್ರವಾಗುತ್ತದೆ ಎಂದು ಚುಟುಕು ಸಾಹಿತ್ಯ ಪರಿಷತ್ ಜಿಲ್ಲಾಧ್ಯಕ್ಷ ಬಾ.ನಂ. ಲೋಕೇಶ್ ಅಭಿಪ್ರಾಯಪಟ್ಟರು.

ನಗರದ ಅಂಬೇಡ್ಕರ್ ಭವನದಲ್ಲಿ ಬೆಸ್ಟ್ ಕಾಮರ್ಸ್ ಪದವಿ ಕಾಲೇಜಿನಿಂದ ಏರ್ಪಡಿಸಿದ್ದ ಸಯೋನಾರ 2026 ಉದ್ಘಾಟಿಸಿ ಮಾತನಾಡಿ, ಬೆಸ್ಟ್ ಕಾಮರ್ಸ್ ಕಾಲೇಜು ಶಿಕ್ಷಣದ ಜೊತೆಗೆ ವಿದ್ಯಾರ್ಥಿಗಳಲ್ಲಿ ಕ್ರೀಡೆ ಮತ್ತು ಸಾಂಸ್ಕೃತಿಕ ಕಲೆ ಹಾಗೂ ಸ್ಕೌಟ್ ಅಂಡ್ ಗೈಡ್ಸ್ ವ್ಯಕ್ತಿತ್ವ ವಿಕಸಿತಗೊಳಿಸುವ ಕೈಂಕರ್ಯವನ್ನು ಮಾಡುತ್ತಿದೆ. ವಿದ್ಯಾರ್ಥಿಗಳು ಜ್ಞಾನದಾಹಿಗಳಾಗಬೇಕು. ಎಲ್ಲರಿಗೂ ಒಂದೇ ಸಮನಾದ ಬುದ್ಧಿಶಕ್ತಿ ಇರುತ್ತದೆ ಬುದ್ಧಿಯನ್ನು ಯಾರು ಹೆಚ್ಚು ಬಳಸಿಕೊಳ್ಳುತ್ತಾರೋ ಅವರು ಜೀವನದಲ್ಲಿ ಯಶಸ್ಸನ್ನು ಕಾಣುತ್ತಾರೆ. ಬಳಕೆ ಮಾಡಿಕೊಳ್ಳದವರು ಜೀವನದಲ್ಲಿ ವಿಫಲತೆಯನ್ನು ಕಾಣುತ್ತಾರೆ. ಒಬ್ಬ ರೈತ ಬೆಳೆಯನ್ನು ಬೆಳೆಯಲು ಒಂದು ವರ್ಷ ಹೇಗೆ ಕಷ್ಟಪಡುತ್ತಾರೋ ಹಾಗೆ ವಿದ್ಯಾರ್ಥಿಗಳು ವ್ಯಾಸಂಗದ ಅವಧಿಯಲ್ಲಿ ನಿಷ್ಠೆಯಿಂದ ವ್ಯಾಸಂಗ ಮಾಡಬೇಕು ಆಗ ಮಾತ್ರ ಯಶಸ್ಸನ್ನು ಸಾಧಿಸಲು ಸಾಧ್ಯ ಎಂದರು.

ಕಾಲೇಜಿನ ಸಂಸ್ಥಾಪಕ ಅಧ್ಯಕ್ಷ ಪಿ.ಎಸ್ ಮಂಜೇಗೌಡ ಮಾತನಾಡಿ, ವಿದ್ಯಾರ್ಥಿಗಳು ಶಿಕ್ಷಣದ ಜೊತೆಗೆ ಉತ್ತಮ ಗುಣಗಳನ್ನು ಬೆಳೆಸಿಕೊಳ್ಳಬೇಕು. ಶಿಕ್ಷಣ ನಿಮ್ಮನ್ನು ವಿದ್ಯಾವಂತರನ್ನಾಗಿ ಮಾಡಿದರೆ ಒಳ್ಳೆಯ ಗುಣ ನಿಮ್ಮ ವ್ಯಕ್ತಿತ್ವವನ್ನು ಉನ್ನತ ಮಟ್ಟಕ್ಕೆ ಕೊಂಡೊಯ್ಯುತ್ತದೆ ಎಂದರು.

ಕಾಲೇಜಿನ ಕೋಶಾಧ್ಯಕ್ಷ ವೈ.ಹೆಚ್. ಈಶ್ವರ್ ಯಲಗುಂದ ಮಾತನಾಡಿ, ನಮ್ಮ ಕಾಲೇಜಿನಲ್ಲಿ ಪ್ರತಿ ವರ್ಷ ಅಂತರ ಕಾಲೇಜು ಮಟ್ಟದ ಸ್ಪರ್ಧೆಗಳಲ್ಲಿ, ವಿಶ್ವವಿದ್ಯಾಲಯ ಮಟ್ಟದ ಸ್ಪರ್ಧೆಗಳಲ್ಲಿ ಭಾಗವಹಿಸಿ ಪ್ರಶಸ್ತಿಗಳನ್ನು ಬಾಚುವುದರೊಂದಿಗೆ ಶಿಕ್ಷಣದ ಜೊತೆ ಕ್ರೀಡೆಯಲ್ಲಿಯೂ ಕೂಡ ಮುಂದಿದ್ದಾರೆ. ಹಾಸನಾಂಬ ಜಾತ್ರಾ ಮಹೋತ್ಸವದಲ್ಲಿ ಸ್ವಯಂ ಸೇವಕರಾಗಿ ನಮ್ಮಲ್ಲಿರುವ ಭಾರತ್ ಸ್ಕೌಟ್ಸ್ ಅಂಡ್ ಗೈಡ್ಸ್ ತಂಡ ಸಾಮಾಜಿಕ ಸೇವಾ ಕೆಲಸಗಳಲ್ಲಿ ತೊಡಗುತ್ತದೆ ಎಂದರು.

ಪ್ರಾಂಶುಪಾಲ ಕೆ.ಸಿ. ನವೀನ್ ಅಧ್ಯಕ್ಷತೆ ವಹಿಸಿ ಮಾತನಾಡಿ, ಉತ್ತಮ ಶಿಕ್ಷಣ ಎಲ್ಲಿ ದೊರೆಯುತ್ತದೆಯೋ ಅಲ್ಲಿ ವಿದ್ಯಾರ್ಥಿಗಳ ದಾಖಲಾತಿ ಸಂಖ್ಯೆಯು ಕೂಡ ಹೆಚ್ಚಾಗುತ್ತದೆ. ನಮ್ಮಲ್ಲಿ ಪ್ರತಿವರ್ಷ ಪ್ರತಿಶತ ನೂರರಷ್ಟು ಫಲಿತಾಂಶ ಬರುತ್ತಿದ್ದು ನಮ್ಮಲ್ಲಿ ಕಲಿತ ವಿದ್ಯಾರ್ಥಿಗಳು ಒಂದಿಲ್ಲೊಂದು ಉದ್ಯೋಗವನ್ನು ಮಾಡುತ್ತಾ ದೇಶ ವಿದೇಶಗಳಲ್ಲಿ ತಮ್ಮ ಜೀವನವನ್ನು ಕಟ್ಟಿಕೊಂಡಿದ್ದಾರೆ. ಇದು ನಮಗೆ ತೃಪ್ತಿ ತಂದಿದೆ ಎಂದರು.

ಕ್ರೀಡೆ ಮತ್ತು ಸಾಂಸ್ಕೃತಿಕ ಕಾರ್ಯಕ್ರಮಗಳಲ್ಲಿ ಭಾಗವಹಿಸಿ ವಿಜೇತರಾದ ವಿದ್ಯಾರ್ಥಿಗಳನ್ನು ಸನ್ಮಾನಿಸಲಾಯಿತು. ಆಡಳಿತಾಧಿಕಾರಿ ಡಾ. ನಿತ್ಯಾನಂದ, ಡಾ. ವಿಕ್ರಂ, ಉಪನ್ಯಾಸಕರು ಹಾಗೂ ವಿದ್ಯಾರ್ಥಿಗಳಿದ್ದರು.

# ಮೇ 21ಕ್ಕೆ ಪ್ಲಾಂಟರ್ಸ್ ಸಂಘದ ವಾರ್ಷಿಕ ಮಹಾಸಭೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಸಕಲೇಶಪುರ: ಜಿಲ್ಲಾ ಪ್ಲಾಂಟರ್ಸ್ ಸಂಘದಿಂದ ಮೇ 21ರಂದು ಬೆಳೆಗಾರರ ಸಮ್ಮೇಳನ, ಕಾಫಿ ಕೃಷಿ ಮೇಳ ಹಾಗು 30ನೇ ವಾರ್ಷಿಕ ಮಹಾಸಭೆ ಆಯೋಜಿಸಲಾಗಿದೆ ಎಂದು ಸಂಘದ ಅಧ್ಯಕ್ಷ ಎ.ಎಸ್. ಪರಮೇಶ್ ತಿಳಿಸಿದ್ದಾರೆ.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಗುರುವಾರ ಬೆಳಿಗ್ಗೆ 10.30ಕ್ಕೆ ಪಟ್ಟಣದ ಶ್ರೀ ಗುರುವೇಗೌಡ ಕಲ್ಯಾಣ ಮಂಟಪದಲ್ಲಿ ಕಾರ್ಯಕ್ರಮ ಆಯೋಜಿಸಿದ್ದು ಸಂಸದ ಶ್ರೇಯಸ್ ಪಟೇಲ್ ಉದ್ಘಾಟಿಸಲಿದ್ದಾರೆ. ಜಯದೇವ ಹೃದ್ರೋಗ ವಿಜ್ಞಾನ ಮತ್ತು ಸಂಶೋಧನಾ ಸಂಸ್ಥೆಯ ನಿರ್ದೇಶಕ ಡಾ. ಬಿ.ದಿನೇಶ್, ಶಾಸಕ ಸಿಮೆಂಟ್ ಮಂಜು, ಬಿಜೆಪಿ ಜಿಲ್ಲಾಧ್ಯಕ್ಷ ಸಿದ್ದೇಶ್ ನಾಗೇಂದ್ರ ಮತ್ತಿತರರು ಭಾಗವಹಿಸಲಿದ್ದಾರೆ. ಕೃಷಿ ವಸ್ತುಪ್ರದರ್ಶನ ಏರ್ಪಡಿಸಲಾಗಿದ್ದು, ವಿವಿಧ ಕೃಷಿ ಹಾಗು ತೋಟಗಾರಿಕೆ ಸಂಬಂಧಿತ ಕಂಪನಿಗಳು ಭಾಗವಹಿಸಲಿವೆ. ಸುಮಾರು 1500ಕ್ಕೂ ಹೆಚ್ಚು ಬೆಳೆಗಾರರು ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವ ನಿರೀಕ್ಷೆಯಿದೆ ಎಂದರು.

# ಲೋ ನವೀನ ಸಿನಿಮಾ ವೀಕ್ಷಣೆಗೆ ನಟ ನವೀನ್ ಮನವಿ




**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಅಪ್ಪಟ ಗ್ರಾಮೀಣ ಸೊಗಡಿನ ಕಥೆ, ಹಾಡುಗಳುಳ್ಳ ಲೋ ಸಿನಿಮಾ ಚಿತ್ರಕ್ಕೆ ಎಲ್ಲೆಡೆ ಉತ್ತಮ ಪ್ರತಿಕ್ರಿಯೆ ವ್ಯಕ್ತವಾಗುತ್ತಿದೆ. ಜಿಲ್ಲೆಯ ಜನರು ಚಿತ್ರಮಂದಿರದಲ್ಲಿ ಸಿನಿಮಾ ವೀಕ್ಷಿಸಿ ಪ್ರೋತ್ಸಾಹಿಸಬೇಕು ಎಂದು ನಟ, ಸಂಗೀತ ನಿರ್ದೇಶಕ ನವೀನ್ ಸಜ್ಜು ಕೋರಿದರು.

ಸುದ್ದಿಗೋಷ್ಠಿಯಲ್ಲಿ ಮಂಗಳವಾರ ಮಾತನಾಡಿ, ಹಳೇ ಮೈಸೂರು ಭಾಗದಲ್ಲಂತೂ ಒಮ್ಮೆ ಸಿನಿಮಾ ನೋಡಿದವರು ಮತ್ತೊಮ್ಮೆ ನೋಡುತ್ತಿದ್ದಾರೆ. ಅದರಲ್ಲೂ ಮಕ್ಕಳು, ಮಹಿಳೆಯರು, ಹಿರಿಯರು ಕುಟುಂಬ ಸಮೇತರಾಗಿ ಆಗಮಿಸಿ ಚಿತ್ರ ವೀಕ್ಷಣೆ ಮಾಡುತ್ತಿರುವುದು ಸಂತಸ ತಂದಿದೆ ಎಂದರು.

ನಟನಾಗಿ ಇದು ನನಗೆ ಮೊದಲ ಸಿನಿಮಾ, ಇದು ಎಲ್ಲರೂ ಕುಳಿತು ನೋಡುವ ಸಿನಿಮಾ, ಈಗಾಗಲೇ 8 ಹಾಡುಗಳು ಸೂಪರ್ ಹಿಟ್ ಆಗಿವೆ. ಚಿತ್ರ ಎಲ್ಲ ಘಟನೆ, ಸನ್ನಿವೇಶಗಳು ನಮ್ಮ ಕಣ್ಣ ಮುಂದೆಯೇ ನಡೆಯುತ್ತಿವೆಯೋ ಎಂದು ಭಾಸವಾಗುತ್ತದೆ. ಆ ರೀತಿ ಚಿತ್ರೀಕರಣ ಮಾಡಲಾಗಿದೆ, ಒಳ್ಳೇ ಸಂದೇಶದ ಜೊತೆಗೆ ಸುಮಾರು 2 ಗಂಟೆ ಕಾಲ ನೋಡುಗರಿಗೆ ಒಳ್ಳೆಯ ಮನರಂಜನೆ ಸಿಗಲಿದೆ ಎಂದು ಹೇಳಿದರು.

ರಾಜ್ಯಾದ್ಯಂತ 130 ಕಡೆ ಸಿನಿಮಾ ಬಿಡುಗಡೆ ಆಗಿದೆ. ಈಗಾಗಲೇ 350 ಶೋ ಪ್ರದರ್ಶನ ಕಂಡಿದೆ. ಹೊಸತನದ ಭಾಷೆಯನ್ನು ಉತ್ತರ ಕರ್ನಾಟಕ ಭಾಗದ ಜನರೂ ಇಷ್ಟಪಟ್ಟು ಪ್ರೋತ್ಸಾಹಿಸುತ್ತಿದ್ದಾರೆ ಎಂದರು.

ಇದೇ ವೇಳೆ ಸಿನಿಮಾವನ್ನು ಮೊಬೈಲ್ ರೆಕಾರ್ಡ್ ಮಾಡಿ ಫೇಸ್‌ಬುಕ್ ಇತ್ಯಾದಿ ಸೋಷಿಯಲ್ ಮೀಡಿಯಾಗಳಲ್ಲಿ ಅಪ್‌ಲೋಡ್ ಮಾಡಬೇಡಿ ಎಂದು ಮನವಿ ಮಾಡಿದ ನವೀನ್, ನಾವು ನಮ್ಮದೇ ಕನಸು ಹೊತ್ತು ಕಷ್ಟಪಟ್ಟು ಸಿನಿಮಾ ಮಾಡಿರುತ್ತೇವೆ. ಇದಕ್ಕಾಗಿ ಹಲವು ವರ್ಷ ಹಗಲಿರುಳು ಶ್ರಮ ಹಾಕಿರುತ್ತೇವೆ. ಅದನ್ನು ಕೆಲವೇ ಕ್ಷಣಗಳಲ್ಲಿ ಹಾಳು ಮಾಡಬೇಡಿ ಎಂದು ವಿನಂತಿಸಿದರು.

# ಪ್ರತ್ಯೇಕ ಅಪಘಾತ ಇಬ್ಬರು ಸಾವು-ಮತ್ತಿಬ್ಬರಿಗೆ ಗಾಯ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಆಲೂರು ಹಾಗೂ ಹಾಸನ ಸಂಚಾರ ಠಾಣೆ ವ್ಯಾಪ್ತಿಯಲ್ಲಿ ನಡೆದ ಪ್ರತ್ಯೇಕ ರಸ್ತೆ ಅಪಘಾತದಲ್ಲಿ ಇಬ್ಬರು ಮೃತಪಟ್ಟು ಇಬ್ಬರು ಗಾಯಗೊಂಡಿದ್ದಾರೆ.

ಕಾರು ಡಿಕ್ಕಿಯಾಗಿ ಪಾದಚಾರಿ ಅಸುನೀಗಿರುವ ಘಟನೆ ಬಿಟ್ಟಗೌಡನಹಳ್ಳಿಯ ಎಸ್.ಎ.ಗುಜರಿ ಅಂಗಡಿ ಸಮೀಪ ನಡೆದಿದೆ. ಶ್ರೀನಗರದ ಅಫ್ಜಲ್ ಪಾಷ ಮೃತರು. ಗುಜರಿ ಅಂಗಡಿಯಲ್ಲಿ ಕೆಲಸ ಮಾಡಿಕೊಂಡಿದ್ದ ಅವರು ಸೋಮವಾರ ಬೆಳಗಿನ ಉಪಾಹಾರ ಸೇವಿಸಲೆಂದು ಮನೆಗೆ ಬರುತ್ತಿದ್ದಾಗ

ಎದುರುಗಡೆಯಿಂದ ವೇಗವಾಗಿ ಬಂದ ಕಾರು ಡಿಕ್ಕಿಯಾಗಿದೆ. ಗಂಭೀರ ಗಾಯಗೊಂಡಿದ್ದ ವ್ಯಕ್ತಿಯನ್ನು ಆಸ್ಪತ್ರೆಗೆ ದಾಖಲಿಸಲಾಯಿತಾದರೂ ಚಿಕಿತ್ಸೆ ಫಲಿಸದೆ ಮೃತಪಟ್ಟಿದ್ದಾರೆ. ಸಂಚಾರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಮತ್ತೊಂದು ಪ್ರಕರಣದಲ್ಲಿ ಕಾರು ಡಿಕ್ಕಿಯಾಗಿ ಯುವಕ ಮೃತಪಟ್ಟು ಇಬ್ಬರು ಗಂಭೀರ ಗಾಯಗೊಂಡಿರುವ ಘಟನೆ ಆಲೂರು ತಾಲ್ಲೂಕಿನ ರಾಷ್ಟ್ರೀಯ ಹೆದ್ದಾರಿ 75ರ ಮಣಿಪುರ ಸಮೀಪ ನಡೆದಿದೆ.

ಕೆ.ಹೊಸಕೋಟೆ ಹೋಬಳಿ ಅಬ್ಬನ ಗ್ರಾಮದ ಕಿರಣ್ (19) ಮೃತರು. ಅದೇ ಗ್ರಾಮದ ಕಾರ್ತಿಕ್ ಹಾಗೂ ಲೋಕೇಶ್ ಎಂಬುವವರು ಗಾಯಗೊಂಡಿದ್ದು ಆಸ್ಪತ್ರೆಗೆ ದಾಖಲಿಸಲಾಗಿದೆ. ಸೋಮವಾರ ರಾತ್ರಿ 9.30ರ ಸಮಯದಲ್ಲಿ ಮೂವರು ಡಿಯೋ ಸ್ಕೂಟರ್‌ನಲ್ಲಿ ಪಾಳ್ಯದಿಂದ ಆಲೂರು ಕಡೆಗೆ ಬರುತ್ತಿದ್ದಾಗ ಹಿಂಬದಿಯಿಂದ ವೇಗವಾಗಿ ಬಂದ ಕಾರು ಡಿಕ್ಕಿಯಾಗಿದೆ. ಆಲೂರು ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ

# ಇತಿಹಾಸದಲ್ಲಿ ಈ ದಿನ

## ಮೇ-21

1498: ಪೋರ್ಚುಗೀಸ್ ನಾವಿಕ ವಾಸ್ಕೋಡ ಗಾಮಾ ಭಾರತದ ಕಲ್ಲಿಕೋಟೆ ತಲುಪಿ, ಯುರೋಪಿನಿಂದ ಸಮುದ್ರ ಮಾರ್ಗದ ಮೂಲಕ ಭಾರತವನ್ನು ತಲುಪಿದ ಮೊದಲ ಯುರೋಪಿಯನ್ ಎನಿಸಿಕೊಂಡರು.

1862: ಅಮೆರಿಕದ ಅಧ್ಯಕ್ಷ ಅಬ್ರಹಾಂ ಲಿಂಕನ್ ಹೋಂಸ್ಟೆಡ್ ಕಾಯ್ದೆಗೆ ಸಹಿ ಹಾಕಿದರು.

1873: ಲೆವಿ ಸ್ಟ್ರಾಸ್ ಮತ್ತು ಜೇಕಬ್ ಡೇವಿಸ್ ನೀಲಿ ಜೀನ್ಸ್‌ಗೆ ಪೇಟೆಂಟ್ ಪಡೆದರು.

1927: ವೈಮಾನಿಕ ಸಾಹಸಿ ಚಾರ್ಲ್ಸ್ ಲಿಂಡ್ಬರ್ಗ್ ಮೊದಲ ಏಕಾಂಗಿ ನಿರಂತರ ಅಟ್ಲಾಂಟಿಕ್ ವಿಮಾನಯಾನವನ್ನು ಆರಂಭಿಸಿದರು.

2002: ಪೂರ್ವ ಟಿಮೋರ್ ಅಧಿಕೃತವಾಗಿ ಸ್ವಾತಂತ್ರ್ಯ ರಾಷ್ಟ್ರವಾಯಿತು.

2006: ಚೀನಾದ ಭವ್ಯ ಥ್ರೀ ಗಾರ್ಜಸ್ ಅಣೆಕಟ್ಟು ಅಧಿಕೃತವಾಗಿ ಕಾರ್ಯಾರಂಭ ಮಾಡಿತು.

### ಜನನ

1908: ಜೇಮ್ಸ್ ಸ್ಟೀವರ್ಟ್, ಹಾಲಿವುಡ್ ನಟ

1915: ಮೋಶೆ ದಯಾನ್, ಇಸ್ರೇಲಿ ಸೇನಾ ನಾಯಕ ಮತ್ತು ರಾಜಕಾರಣಿ

1946: ಶೆರ್, ಪ್ರಸಿದ್ಧ ಗಾಯಕಿ ಮತ್ತು ನಟಿ

### ನಿಧನ

1506: ಕ್ರಿಸ್ಟೋಫರ್ ಕೊಲಂಬಸ್, ಅಮೆರಿಕ ಖಂಡವನ್ನು ಯುರೋಪಿಗೆ ಪರಿಚಯಿಸಿದ ಅನ್ವೇಷಕ.

1834: ಮಾರ್ಕ್ವಿಸ್ ಡೆ ಲಾಫಾಯೆಟ್, ಫ್ರೆಂಚ್ ಕ್ರಾಂತಿ ಹಾಗೂ ಅಮೆರಿಕದ ಸ್ವಾತಂತ್ರ್ಯ ಹೋರಾಟದ ನಾಯಕ.

2002: ಸ್ಟೀಫನ್ ಜೇ ಗೌಲ್ಡ್, ಖ್ಯಾತ ಜೀವವಿಜ್ಞಾನಿ

# ಬ್ಯಾಂಕ್ ವ್ಯವಸ್ಥಾಪಕಿ ಬಂಧನಕ್ಕೆ ಆಗ್ರಹಿಸಿ ಇಂದು ಪ್ರತಿಭಟನೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**




ಹಾಸನ: ಕೋಟ್ಯಂತರ ರೂಪಾಯಿ ವಂಚಿಸಿ ನಾಪತ್ತೆಯಾಗಿರುವ ವಿಜಯ ನಗರದ ಸೂರ್ಯೋದಯ ಬ್ಯಾಂಕ್ ವ್ಯವಸ್ಥಾಪಕಿ ಹೆಚ್.ಎಸ್.ಪೂಜಾ ಅವರನ್ನು ಬಂಧಿಸಿ ನೊಂದವರಿಗೆ ನ್ಯಾಯ ದೊರಕಿಸಿಕೊಡಬೇಕಿದ್ದ ಪೊಲೀಸರು ಆಕೆಗೆ ರಕ್ಷಣೆ ನೀಡುತ್ತಿರುವ ಸಂಶಯ ಕಾಡುತ್ತಿದೆ ಎಂದು ಶಂಕರನಹಳ್ಳಿಯ ವಿಶ್ವಾಸ್ ಆರೋಪಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಜಿಲ್ಲೆಯ 60ಕ್ಕೂ ಅಧಿಕ ಜನರು ಹಣ ಹೂಡಿಕೆ ಮಾಡಿ ಕೈಸುಟ್ಟುಕೊಂಡಿದ್ದಾರೆ. ಬ್ಯಾಂಕ್ ವ್ಯವಸ್ಥಾಪಕಿ ಪೂಜಾ ವಿರುದ್ಧ ದೂರು ನೀಡಿ 2 ತಿಂಗಳು ಕಳೆದಿದ್ದರೂ ಬಂಧಿಸಿಲ್ಲ. ಈ ವಂಚನೆಗೆ ನಗರ ಠಾಣೆ ಕಾನ್ಸಟೇಬಲ್ ಪ್ರವೀಣ್ ಎಂಬುವವರು ಸಹಕರಿಸಿರುವ ಅನುಮಾನವಿದೆ. ಆದ್ದರಿಂದ ಸಮಗ್ರ ತನಿಖೆ ನಡೆಸಬೇಕೆಂದು ಆಗ್ರಹಿಸಿದರು.

ವಂಚಕರ ವಿರುದ್ಧ ಶಾಂತಿಯುತ ಪ್ರತಿಭಟನೆ ಮಾಡುವುದಕ್ಕಾಗಿ ಅನುಮತಿ ಕೇಳಲು ಹೋದಾಗ ನಗರ ಠಾಣೆ ಇನ್ಸ್‌ಪೆಕ್ಟರ್ ಬಾನು ಅವರು ಅನುಮತಿ ನೀಡಲಿಲ್ಲ. ಪೊಲೀಸರ ವಿರುದ್ಧ ಮಾತನಾಡಿದ್ದೀಯಾ, ದೂರಿನಲ್ಲಿ ಪ್ರವೀಣ್ ಹೆಸರನ್ನು ಕೈ ಬಿಟ್ಟರೆ ಮಾತ್ರ ಅನುಮತಿ ನೀಡಲಾಗುವುದು, ಇಲ್ಲವಾದರೆ ಇಲ್ಲ ಎಂದು ಗದರಿಸಿದರು ಎಂದು ದೂರಿದರು.

ಪೊಲೀಸರ ಈ ನಡೆ ಖಂಡಿಸಿ ಮೇ 20 ರಂದು ನಗರದ ಹೇಮಾವತಿ ಪ್ರತಿಮೆ ಬಳಿಯಿಂದ ಜಿಲ್ಲಾಧಿಕಾರಿ ಕಚೇರಿ ವರೆಗೆ ಕೆಆರ್‌ಎಸ್ ಪಕ್ಷದ ಸಹಯೋಗದೊಂದಿಗೆ ಮುಷ್ಕರ ನಡೆಸಲಾಗುವುದೆಂದರು.

ಸಂತ್ರಸ್ತೆ ಗೀತಾ ಮಾತನಾಡಿ, ಜಿಲ್ಲಾಧಿಕಾರಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ, ಇನ್ಸ್‌ಪೆಕ್ಟರ್ ಬಾನು ಅವರು ಮಹಿಳೆಯರೇ ಆಗಿರುವುದರಿಂದ ನಮಗೆ ನ್ಯಾಯ ಕೊಡಿಸಬೇಕು. ಮಾಂಗಲ್ಯ ಸರ ಅಡವಿಟ್ಟು ಬ್ಯಾಂಕ್‌ನಲ್ಲಿ ಹಣ ಹೂಡಿಕೆ ಮಾಡಿದ್ದೇವೆ. ಈಗ ಬದುಕು ಬೀದಿಗೆ ಬಂದಿದೆ. ನಾಪತ್ತೆಯಾಗಿರುವ ವ್ಯವಸ್ಥಾಪಕಿಯನ್ನು ಬಂಧಿಸಬೇಕೆಂದು ಕೋರಿದರು.

ಸುದ್ದಿಗೋಷ್ಠಿಯಲ್ಲಿ ಚಂದ್ರೇಗೌಡ, ನಂದೀಶ್, ಶ್ರೀನಿವಾಸ್, ಧರ್ಮಪ್ರಕಾಶ್, ಹರೀಶ್ ಇದ್ದರು.

Printed, Published and Owned by Manjunatha B.R. and Printed at PAPPAS PRINT HOUSE, BEHIND DISTRICT STADIUM, M.G.ROAD,VIDYANAGAR, HASSAN, KARNATAKA-573201 and published at No. 150, BANAVASE, SAKALESHPURA TALLUK, HASSAN DISTRICT, KARNATAKA-573201. Editor: MANJU BANAVASE. Ph: 8762954248